ಸಾಕ್ಷಿಯನ್ನು ಮುಂದಿನ ಮುಖ್ಯ ವಿಚಾರಣೆಗೆ ನ್ಯಾಯಾಲಯದ ಆದೇಶದ ಪ್ರಕಾರ ಪುನಃ ಕರೆಯಿಸಲಾಯಿತು.

**ಮುಂದುವರೆದ ಮುಖ್ಯವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ**

8. ನನ್ನ ತಾಯಿಯನ್ನು ಕೊಲೆ ಮಾಡಲು ನನ್ನ ತಂದೆ ಉಪಯೋಗಿಸಿದಂತಹ ಚಾಕುವನ್ನು ನೋಡಿದಲ್ಲಿ ನಾನು ಗುರುತಿಸುತ್ತೇನೆ. ಸಾಕ್ಷಿಯು ಈಗ ನ್ಯಾಯಾಲಯದ ಮುಂದೆ ಇರುವ ಚಾಕುವನ್ನು ಗುರುತಿಸುತ್ತಿದ್ದು, ಅದನ್ನು ಈಗಾಗಲೇ ಮುಮಾ-7 ಎಂದು ಗುರುತಿಸಲಾಗಿದೆ.

**ಪಾಟೀ ಸವಾಲುಃ ಆರೋಪಿ ಪರವಾಗಿಃ ಶ್ರೀ ಪಿ ಜೆ ಜಿ (ಡಿ ಎಲ್ ಎಸ್ ಎ) ವಕೀಲರಿಂದಃ**

9. ಈ ದಿನ ನನ್ನನ್ನು ನನ್ನ ಮಾವ ಅಂದರೆ ನನ್ನ ತಾಯಿಯ ತಮ್ಮ ನ್ಯಾಯಾಲಯಕ್ಕೆ ಕರೆದುಕೊಂಡು ಬಂದಿರುತ್ತಾರೆ. ನನ್ನ ಮಾವ ನನಗೆ ಹೇಳಿಕೊಟ್ಟ ರೀತಿಯಲ್ಲಿ ನಾನು ಈ ದಿನ ನ್ಯಾಯಾಲಯದ ಮುಂದೆ ಸಾಕ್ಷಿ ನುಡಿದಿದ್ದೇನೆ ಎನ್ನುವುದು ನಿಜವಲ್ಲ. ಮುಮಾ-7 ಚಾಕುವನ್ನು ನಾನು ಇದೇ ಮೊದಲ ಬಾರಿಗೆ ಈ ನ್ಯಾಯಾಲಯದ ಮುಂದೆ ನೋಡುತ್ತಿದ್ದೇನೆ ಎನ್ನುವುದು ನಿಜವಲ್ಲ. ನಾನು ನನ್ನ ಮಾವ ಹೇಳಿಕೊಟ್ಟಂತೆ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎನ್ನುವುದು ನಿಜವಲ್ಲ.

**ಮರುವಿಚಾರಣೆಃ ಇಲ್ಲ.**

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ,

(ಮಂಜುನಾಥ ನಾಯಕ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಳಗಾವಿ.